# ಕರ್ನಾಟಕ ಲೋಕಸೇವಾ ಆಯೋಗ

**"ಉದ್ಯೋಗ ಸೌಧ'' ಬೆಂಗಳೂರು-560 001.**

ಸಂಖ್ಯೆ: ಪಿಎಸ್ ಸಿ/140 /ಇ(1) /2024-25 ದಿನಾಂಕ: 06-07-2024

## ತಿದ್ದುಪಡಿ ಅಧಿಸೂಚನೆ-3

ಆಯೋಗವು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಧಿಸೂಚನೆ ಸಂಖ್ಯೆ:ಪಿಎಸ್ ಸಿ 509/ಇ(1)/2023-24, ದಿನಾಂಕ:26-02-2024ರಲ್ಲಿ ಹೊರಡಿಸಲಾಗಿರುತ್ತದೆ.

ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 44 ಎಸ್ಎಸ್ ಸಿ 2024, ದಿನಾಂಕ:21-06-2024ರನ್ವಯ 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳಿಗೆ ಆಯೋಗವು ದಿನಾಂಕ: 26-02-2024ರಂದು ಅಧಿಸೂಚಿಸಿರುವ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳಿಗೆ ಪರೀಕ್ಷೆ ಬರೆಯಲು ವಯೋಮಿತಿಯ ನಿರ್ಬಂಧವಿಲ್ಲದೆ ಒಂದು ಬಾರಿಗೆ ಸೀಮಿತಗೊಳಿಸಿ (one time measure) ಅರ್ಜಿ ಸಲ್ಲಿಸಲು 15 ದಿನಗಳ ಹೆಚ್ಚುವರಿ ವಿಶೇಷ ಕಾಲಾವಕಾಶವನ್ನು ನೀಡಿರುವ ಹಿನ್ನೆಲೆಯಲ್ಲಿ 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳ ನೇಮಕಾತಿಯ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ದಿನಾಂಕ:06-07-2024 ರಿಂದ 21-07-2024 ರವರೆಗೆ ವಿಶೇಷ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ವಿಶೇಷ ಸೂಚನೆ:- ಗೆಜೆಟೆಡ್ ಪ್ರೊಬೇಷನರ್ 2017-18ನೇ ಸಾಲಿನ ಅಭ್ಯರ್ಥಿಗಳು ಈಗಾಗಲೇ "ಕೆ.ಪಿ.ಎಸ್.ಸಿ. ಉದ್ಯೋಗ" ಸಾಫ್ಟ್ ವೇರ್ ನಲ್ಲಿ (https://kpsconline.karnataka.gov.in) OTRಅನ್ನು ರಚಿಸಿದ್ದರೆ, ಅವರು ನೇರವಾಗಿ ಲಾಗ್ ಇನ್ ಆಗುವ ಮೂಲಕ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಈ ಮೊದಲು OTRಅನ್ನು ರಚಿಸಿರದಿದ್ದರೆ ಅವರು "ಕೆ.ಪಿ.ಎಸ್.ಸಿ. ಉದ್ಯೋಗ" ಸಾಫ್ಟ್ ವೇರ್ ನಲ್ಲಿ OTRಅನ್ನು ರಚಿಸಿ, ನಂತರ ಅರ್ಜಿ ಸಲ್ಲಿಸಬಹುದು.

**ಸಹಿ/-**

**(ಡಾ.ರಾಕೇಶ್ ಕುಮಾರ್ ಕೆ.)**

ಕಾರ್ಯದರ್ಶಿ,

ಕರ್ನಾಟಕ ಲೋಕಸೇವಾ ಆಯೋಗ.

# ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ" ಬೆಂಗಳೂರು-560 001.

ಸಂಖ್ಯೆ: ಪಿಎಸ್ ಸಿ /509 ಇ(1)/2023-24 ದಿನಾಂಕ:26-02-2024

## ಅಧಿಸೂಚನೆ

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997 ಹಾಗೂ ಕಾಲಕಾಲಕ್ಕೆ ತಿದ್ದುಪಡಿಯಾದ ನಿಯಮಗಳಡಿಯಲ್ಲಿ ಗೆಜೆಟೆಡ್ ಪ್ರೊಬೇಷನರ್ 2023-24ನೇ ಸಾಲಿನ ಹುದ್ದೆಗಳನ್ನು ಭರ್ತಿ ಮಾಡಲು ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರ.ಸಂ. | ಸೇವಾ ವೃಂದದ ಹೆಸರು ಮತ್ತು ಇಲಾಖೆಯ ಹೆಸರು | ಹುದ್ದೆಗಳ ಸಂಖ್ಯೆ | | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| | | ಆರ್.ಪಿ.ಸಿ. ವೃಂದ | ಹೈ.ಕ. ವೃಂದ | |
| | ಗ್ರೂಪ್ 'ಎ' | | | |
| 01 | ಸಹಾಯಕ ಆಯುಕ್ತರು (ಕಿರಿಯ ಶ್ರೇಣಿ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | 37 | 03 | 40 |
| 02 | ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು ವಾಣಿಜ್ಯ ತೆರಿಗೆ ಇಲಾಖೆ | 30 | 11 | 41 |
| 03 | ಸಹಾಯಕ ನಿರ್ದೇಶಕರು ಖಜಾನೆ ಇಲಾಖೆ | 01 | 01 | 02 |
| 04 | ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | 32 | 08 | 40 |
| 05 | ಡಿ.ವೈ.ಎಸ್.ಪಿ. ಒಳಾಡಳಿತ ಇಲಾಖೆ | 07 | 02 | 09 |
| 06 | ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ | 14 | 06 | 20 |
| 07 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ಸಹಾಯಕ ನಿರ್ದೇಶಕರು/ಪ್ರಾಂಶುಪಾಲರು (ಪಿಇಟಿಸಿ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | 05 | 02 | 07 |
| | ಒಟ್ಟು | 123 | 36 | 159 |

| ಕ್ರ.ಸಂ. | ಸೇವಾ ವೃಂದದ ಹೆಸರು ಮತ್ತು ಇಲಾಖೆಯ ಹೆಸರು | ಹುದ್ದೆಗಳಸಂಖ್ಯೆ | | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| | | ಆರ್.ಪಿ.ಸಿ. ವೃಂದ | ಹೈ.ಕ. ವೃಂದ | |
| ಗ್ರೂಪ್ 'ಬಿ' | | | | |
| 01 | ತಹಶೀಲ್ದಾರ್ (ಗ್ರೇಡ್-2) ಕಂದಾಯ ಇಲಾಖೆ | 37 | 14 | 51 |
| 02 | ವಾಣಿಜ್ಯ ತೆರಿಗೆ ಅಧಿಕಾರಿ, ವಾಣಿಜ್ಯ ತೆರಿಗೆ ಇಲಾಖೆ | 49 | 10 | 59 |
| 03 | ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ | 03 | 01 | 04 |
| 04 | ಸಹಾಯಕ ಅಧೀಕ್ಷಕರು, ಒಳಾಡಳಿತ ಇಲಾಖೆ (ಕಾರಾಗೃಹ) | 02 | 01 | 03 |
| 05 | ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಇಲಾಖೆ | 12 | - | 12 |
| 06 | ಸಹಾಯಕ ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ | 09 | - | 09 |
| 07 | ಅಬಕಾರಿ ಉಪ ಅಧೀಕ್ಷಕರು, ಆರ್ಥಿಕ ಇಲಾಖೆ (ಅಬಕಾರಿ) | 08 | 02 | 10 |
| 08 | ಉದ್ಯೋಗಾಧಿಕಾರಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | 02 | 01 | 03 |
| 09 | ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | 04 | - | 04 |
| 10 | ಮುಖ್ಯಾಧಿಕಾರಿ (ಗ್ರೇಡ್-1), ನಗರಾಭಿವೃದ್ಧಿ ಇಲಾಖೆ | - | 01 | 01 |
| 11 | ಸಹಾಯಕ ಖಜಾನಾಧಿಕಾರಿ, ಆರ್ಥಿಕ ಇಲಾಖೆ, (ಖಜಾನೆ) | 38 | 08 | 46 |
| 12 | ಸಹಾಯಕ ನಿರ್ದೇಶಕರು, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ | 09 | - | 09 |
| 13 | ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ | 01 | 01 | 02 |
| 14 | ಶಾಖಾಧಿಕಾರಿ, ಕರ್ನಾಟಕ ಸರ್ಕಾರದ ಸಚಿವಾಲಯ | 04 | 01 | 05 |
| 15 | ಸಹಾಯಕ ನಿರ್ದೇಶಕರು (ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ | 06 | 01 | 07 |
| ಒಟ್ಟು | | 184 | 41 | 225 |
| ಒಟ್ಟಾರೆ ಹುದ್ದೆಗಳು | | | | |
| ಒಟ್ಟು ಗ್ರೂಪ್ 'ಎ' | | 123 | 36 | 159 |
| ಒಟ್ಟು ಗ್ರೂಪ್ 'ಬಿ' | | 184 | 41 | 225 |
| ಒಟ್ಟಾರೆ ಹುದ್ದೆಗಳು | | 307 | 77 | 384 |

❖ ಸರ್ಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ವರ್ಗೀಕರಣವನ್ನು ಅನುಬಂಧ-1ರಲ್ಲಿ ತೋರಿಸಿದೆ.

2. ಆಯ್ಕೆಪ್ರಕ್ರಿಯೆಗೆ ನಿಗದಿಪಡಿಸಿರುವ ಕಾಲಮಿತಿ :

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 04-03-2024 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 03-04-2024 |
| ಪೂರ್ವಭಾವಿ ಪರೀಕ್ಷಾ ದಿನಾಂಕ (ತಾತ್ಕಾಲಿಕ) | 05-05-2024 |

❖ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತೊಂದರೆಗಳು ಎದುರಾದಲ್ಲಿ ಈ ಕೆಳಕಂಡ ಹೆಲ್ಪ್‌ಲೈನ್ ನಂಬರ್ ಅನ್ನುಸಂಪರ್ಕಿಸಲು ಸೂಚಿಸಿದೆ.

HELP LINE NO:080-30574957 / 30574901

2.1 ವಿಶೇಷ ಸೂಚನೆ:-

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿವಿಳಾಸ, ಪ್ರವರ್ಗ, ತಂದೆ-ತಾಯಿ ಹೆಸರು, ವಿದ್ಯಾರ್ಹತೆ ಮುಂತಾದ ವಿಷಯಗಳನ್ನು ತಪ್ಪಾಗಿ ನಮೂದಿಸಿರುವುದಾಗಿ ತಿಳಿಸಿ ಸದರಿ ಮಾಹಿತಿಗಳನ್ನು ಬದಲಾವಣೆ ಮಾಡುವಂತೆ ಮನವಿ ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಆಯೋಗಕ್ಕೆ ಒಂದು ಬಾರಿ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಸದರಿ ಅರ್ಜಿಯಲ್ಲಿನ ಮಾಹಿತಿಗಳನ್ನು ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ ತಂತ್ರಾಂಶದಲ್ಲಿ ಬದಲಾವಣೆ ಮಾಡಲು ಸಾಧ್ಯವಿರದ ಹಿನ್ನೆಲೆಯಲ್ಲಿ ಅಭ್ಯರ್ಥಿಗಳೇ ನೇರವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಮಾಹಿತಿಗಳನ್ನು ಸರಿಪಡಿಸಿ ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಈ ಸಂಬಂಧ ತದನಂತರ ಸಲ್ಲಿಸಲಾಗುವ ಯಾವುದೇ ಕೋರಿಕೆ/ಮನವಿಗಳನ್ನು ಆಯೋಗದಿಂದ ಪುರಸ್ಕರಿಸಲಾಗುವುದಿಲ್ಲ.

2.2 <u>ವಿಶೇಷಸೂಚನೆ:-</u>

(1) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.

(2) ಒಮ್ಮೆಅರ್ಜಿಸಲ್ಲಿಸಿದನಂತರಅರ್ಜಿಯಲ್ಲಿವಿವರಗಳನ್ನುತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.

(3) ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣಪತ್ರ/ಇತರೆ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧ-2ರಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ತಮ್ಮ ಹೆಸರಿನಲ್ಲಿಯೇ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು, (ದಾಖಲೆಗಳುಸ್ಪಷ್ಟವಾಗಿರಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

(4) ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

2.3 ಅರ್ಜಿಗಳನ್ನು Online ಮೂಲಕವೇಭರ್ತಿಮಾಡಿ ,ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ಬ್ಯಾಂಕಿಂಗ್ / ಡೆಬಿಟ್ಕಾರ್ಡ್/ ಕ್ರೆಡಿಟ್ಕಾರ್ಡ್/UPI ಮೂಲಕಸಂದಾಯಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ/ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ವಿಶೇಷ ಸೂಚನೆ: ಸದರಿ ಹುದ್ದೆಗಳಿಗೆ ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳನ್ನು ಅವಶ್ಯಕ ಸಂದರ್ಭಗಳಲ್ಲಿ ಆಯೋಗವು ಪರಿಶೀಲನೆಗೆ ಒಳಪಡಿಸಬಹುದಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ಈಗಾಗಲೇ ಆನ್‌ಲೈನ್ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

## 3. ಅರ್ಜಿ ಸಲ್ಲಿಸುವ ಹಂತಗಳು:-

ಒಂದು ಬಾರಿಯ ನೋಂದಣಿ ಪ್ರಕ್ರಿಯೆ(OTR-ONE TIME REGISTRATION)

ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂಬುದಾಗಿ ಅರ್ಥೈಸಿಕೊಳ್ಳುವಂತಿಲ್ಲ. ನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, (OTR-One Time Registration) ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅಭ್ಯರ್ಥಿಗಳು Profile Creation/ ರುಜುವಾತುಗಳು ಸೃಷ್ಟಿಸುವ ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನುಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

1. ಅಭ್ಯರ್ಥಿಗಳು KPSC ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
2. ಹೊಸದಾಗಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲು, ಅರ್ಜಿದಾರರು KPSC ವೆಬ್‌ಸೈಟ್‌ನಲ್ಲಿ https://kpsconline.karnataka.gov.in ಗೆ ಭೇಟಿ ನೀಡಬೇಕು ಮತ್ತುತಮ್ಮನ್ನುನೋಂದಾಯಿಸಿಕೊಳ್ಳಲು New Registration "ಹೊಸನೋಂದಣಿ" ಲಿಂಕ್‌ಅನ್ನುಕ್ಲಿಕ್ ಮಾಡಬೇಕು.

3. ನೋಂದಣಿ ಮತ್ತುಲಾಗಿನ್ ರುಜುವಾತುಗಳನ್ನುರಚಿಸಲು ನೀವು ಮಾನ್ಯವಾದ ಇಮೇಲ್ ಐಡಿ ಮತ್ತು ಮೊಬೈಲ್ ಸಂಖ್ಯೆಯನ್ನು ಹೊಂದಿರುವಿರಿ ಎಂದು ಖಚಿತಪಡಿಸಿಕೊಳ್ಳಿ.
4. ಒಮ್ಮೆ ನೀವು ನೋಂದಾಯಿಸಿದ ಮತ್ತು ಲಾಗಿನ್ ರುಜುವಾತುಗಳನ್ನುಪಡೆದ ನಂತರ, "ಅರ್ಜಿದಾರರ ವಿವರಗಳನೋಂದಣಿ" ಕ್ಲಿಕ್ ಮಾಡುವ ಮೂಲಕ ನಿಮ್ಮ ಸಂಪೂರ್ಣ ಮಾಹಿತಿಯನ್ನು ಭರ್ತಿಮಾಡಲು ಮುಂದುವರಿಯಿರಿ.
5. ಅಭ್ಯರ್ಥಿಗಳು ತಮ್ಮ ವಿವರಗಳನ್ನು ಒಮ್ಮೆ ಮಾತ್ರ ಭರ್ತಿ ಮಾಡಬೇಕಾಗುತ್ತದೆ ಮತ್ತು ಈ ವಿವರಗಳನ್ನು ಎಲ್ಲಾ ಭವಿಷ್ಯದ KPSC ಅಧಿಸೂಚನೆಗಳಿಗೆ ಬಳಸಲಾಗುತ್ತದೆ. ಆದ್ದರಿಂದ ನಿಮ್ಮ USER ID ಮತ್ತು Password ಗಳನ್ನು ಜೋಪಾನವಾಗಿ ಕಾಯ್ದಿಟ್ಟುಕೊಳ್ಳಿ, ನೀವು ನಿಮ್ಮ Loginನಲ್ಲಿ ಮಾತ್ರ ನಿಮ್ಮ ಮಾಹಿತಿಯನ್ನು ನವೀಕರಿಸಬಹುದು.

ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಮೊದಲು ಎಲ್ಲಾ ವಿವರಗಳು ಸರಿಯಾಗಿದೆಯೇ ಎಂದು ಪರಿಶೀಲಿಸಿಕೊಂಡು ಸಲ್ಲಿಸಲು ಸೂಚಿಸಿದೆ. ಸಲ್ಲಿಸಿದ ನಂತರ ವಿವರಗಳನ್ನು ತಪ್ಪಾಗಿ ಸಲ್ಲಿಸಿದ್ದು ಸರಿಪಡಿಸಿಕೊಡುವಂತೆ ಆಯೋಗಕ್ಕೆ ಪತ್ರ ವ್ಯವಹಾರ ಅಥವಾ E-Mail ಮೂಲಕ ಕಳುಹಿಸುವ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

ಸೂಚನೆ:

1. "ವೈಯಕ್ತಿಕ ವಿವರದಲ್ಲಿ" SSLC ಯನ್ನು 2002 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2003 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು SSLC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
2. "ವೈಯಕ್ತಿಕವಿವರದಲ್ಲಿ" CBSE ಯನ್ನು2003 ಅಥವಾ ಅದಕ್ಕಿಂತ ಹಿಂದೆ ಹಾಗೂICSE/ ಇತರೆ ರಾಜ್ಯ ಸರ್ಕಾರದ 10ನೇ ತರಗತಿಯನ್ನುಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2004 ಮತ್ತುನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು CBSE ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
3. "ವಿದ್ಯಾರ್ಹತೆಯ ವಿವರದಲ್ಲಿ" PUC ತರಗತಿಯನ್ನು 2007 ಅಥವಾ ಅದಕ್ಕಿಂತ ಹಿಂದೆ ಅಭ್ಯಸಿಸಿದ್ದಲ್ಲಿ ಅಥವಾ ಯಾವುದೇ ಡಾಟಾ ಬಾರದೇ ಇದ್ದಲ್ಲಿ ಸ್ವತಃ ವಿವರಗಳನ್ನು ನಮೂದಿಸುವುದು.
4. PUC ತರಗತಿಯನ್ನು 2008 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು PUC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
5. "ಗುರುತಿನಪುರಾವೆ/ವಿವರದಲ್ಲಿ"Aadhaar/Kutumba ID /Ration Card ನ ಸಂಖ್ಯೆಗಳನ್ನು ನಮೂದಿಸಿದಲ್ಲಿ ನಿಮ್ಮ ಖಾಯಂ ವಿಳಾಸದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು.
6. ನಿಮ್ಮಅರ್ಜಿದಾರರ ವಿವರ ಪುಟದಲ್ಲಿಅಗತ್ಯವಿರುವ ಎಲ್ಲಾಮಾಹಿತಿಯನ್ನುಎಚ್ಚರಿಕೆಯಿಂದಒದಗಿಸಿಮತ್ತು SAVE "ಉಳಿಸು" ಬಟನ್‌ಅನ್ನುಬಳಸಿಕೊಂಡು ಅದನ್ನುಉಳಿಸಲುಖಚಿತಪಡಿಸಿಕೊಳ್ಳಿ.

7. "ಮೀಸಲಾತಿ ವಿವರದಲ್ಲಿ "ನೀವು ಮೀಸಲಾತಿಯನ್ನು ಪಡೆಯಲು ಇಚ್ಛಿಸಿದಲ್ಲಿ ನಿಮ್ಮ ಜಾತಿ ಮೀಸಲಾತಿ / HK ಮೀಸಲಾತಿ ಪ್ರಮಾಣ ಪತ್ರದ RD ಸಂಖ್ಯೆಯನ್ನು ನಮೂದಿಸಿದಲ್ಲಿ API ಮೂಲಕ ವಿವರಗಳನ್ನು ಸ್ವಯಂ ಚಾಲಿತವಾಗಿ ಪಡೆಯಲಾಗುವುದು ಅಥವಾ ಸ್ವತ: ಅಭ್ಯರ್ಥಿಗಳು [Manual Entry] ವಿವರಗಳನ್ನು ದಾಖಲಿಸಲು ಅವಕಾಶ ನೀಡಲಾಗಿರುತ್ತದೆ.
8. ನೀವು ಇತ್ತೀಚಿನಪಾಸ್ ಪೋರ್ಟ್ ಗಾತ್ರದ ಛಾಯಾಚಿತ್ರ ಮತ್ತು ಸಹಿ ಅಪ್‌ಲೋಡ್ ಮಾಡಬೇಕಾಗುತ್ತದೆ. ಛಾಯಾಚಿತ್ರವು 200 ಕೆಬಿ ಮೀರಬಾರದು ಮತ್ತು ಸಹಿ 70 ಕೆಬಿ ಒಳಗೆ ಇರಬೇಕು. ಗಮನಿಸಿ: ಕೇವಲ ಸಹಿ ಮತ್ತು ಛಾಯಾಚಿತ್ರ ವನ್ನು JPEG/JPG ಸ್ವರೂಪದಲ್ಲಿ ಅಪ್‌ಲೋಡ್ ಮಾಡಬೇಕು.
9. <u>ವಿಶೇಷ ಸೂಚನೆ:-</u> ನೀವು ಒಂದು ಬಾರಿ ನೋಂದಣಿ ಪ್ರಕ್ರಿಯೆಯನ್ನು **(OTR-ONE TIME REGISTRATION) ಪೂರ್ಣಗೊಳಿಸಿದ ಮಾತ್ರಕ್ಕೆ ಮೇಲೆ ತಿಳಿಸಲಾದ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲಾಗಿದೆ ಎಂದು ಭಾವಿಸತಕ್ಕದ್ದಲ್ಲ. ನಿಮ್ಮ ರುಜುವಾತುಗಳೊಂದಿಗೆ ಲಾಗಿನ್ ಮಾಡಿದ ನಂತರ ಅರ್ಜಿಯನ್ನು ಸಲ್ಲಿಸಲು "Apply to Post" Tab ಅನ್ನು ಕ್ಲಿಕ್ ಮಾಡಿ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿರುತ್ತದೆ.**

"KPSC udyoga" ತಂತ್ರಾಂಶದ ಮೂಲಕ ಆಯೋಗದಿಂದ ಅಧಿಸೂಚಿಸಲಾದ ಮೇಲ್ಕಂಡ ಹುದ್ದೆಗೆ
ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ಸೂಚನೆಗಳು:
Instructions for Candidates to Apply Online for above Notified Post throughKPSC Udyoga Software:

1. ನಿಮ್ಮ ರುಜುವಾತುಗಳೊಂದಿಗೆ ಲಾಗ್ಇನ್ ಮಾಡಿದ ನಂತರ, ನೀವು ಸಕ್ರಿಯ ಅಧಿಸೂಚನೆಗಳನ್ನು ನೋಡುತ್ತೀರಿ. ಅರ್ಜಿ ಸಲ್ಲಿಸಲು " Apply to Post " Tab ಅನ್ನುಕ್ಲಿಕ್ ಮಾಡಿ.
2. **"Apply Post"** ಲಿಂಕ್‌ಅನ್ನುಕ್ಲಿಕ್ ಮಾಡುವುದರಿಂದ ನೀವು ಅಧಿಸೂಚನೆಯ ಪ್ರಕಾರ ಅರ್ಹತಾಮಾನ ದಂಡಗಳನ್ನು ಪೂರೈಸಿದ್ದಿರಾ ಎಂದು ತಂತ್ರಾಂಶವು ಪರಿಶೀಲಿಸುತ್ತದೆ. ನೀವು ಅನರ್ಹರಾಗಿದ್ದರೆ, ಸಿಸ್ಟಮ್ ಮುಕ್ತವಾದ ಸಂದೇಶವನ್ನು ಪ್ರದರ್ಶಿಸುತ್ತದೆ.
3. ಅರ್ಹತಾ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಗೆ ಮಾತ್ರ ಅವರ ಅರ್ಜಿಯನ್ನು ಮುಂದುವರಿಸಲು ತಂತ್ರಾಂಶವು ಅನುಮತಿಸುತ್ತದೆ. ಅಭ್ಯರ್ಥಿಗಳು Notification ಅನ್ನು ಪೂರ್ಣವಾಗಿ ಓದಿ ತಮ್ಮ ಅರ್ಹತೆ ಬಗ್ಗೆ ಮನದಟ್ಟು ಮಾಡಿಕೊಂಡ ನಂತರವೇ ಅರ್ಜಿ ಹಾಕುವುದು ಮತ್ತು ಶುಲ್ಕವನ್ನು ತುಂಬಬೇಕು.

<u>4.ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು, ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ. ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಸಲ್ಲಿಸಲಾದ ಅರ್ಜಿಯಲ್ಲಿನ ವಿವರಗಳನ್ನು ಮತ್ತೊಮ್ಮೆ ಬದಲಾವಣೆ ಮಾಡಲು ಬಯಸಿದಲ್ಲಿ "Applied Post" Tab ನಲ್ಲಿ ಸಲ್ಲಿಸಲಾದ ಹುದ್ದೆಯ ಅರ್ಜಿಯನ್ನು "Delete" ಮಾಡಿ ಮತ್ತೊಮ್ಮೆ OTR ಅರ್ಜಿಯಲ್ಲಿನ ವಿವರಗಳನ್ನು ಬದಲಾಯಿಸಿಕೊಂಡು ಹೊಸ ಅರ್ಜಿಯನ್ನು ಸಲ್ಲಿಸಬಹುದು. ಆದರೆ Delete ಮಾಡಿದ ಹುದ್ದೆಗೆ ಈಗಾಗಲೇ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೆ ಸರಿದೂಗಿಸುವ ಅಥವಾ ಹಿಂದಿರುಗಿಸುವ ಅವಕಾಶವಿರುವುದಿಲ್ಲ.</u>

5. ನಿರ್ದಿಷ್ಟ ಅಧಿಸೂಚನೆಗಾಗಿ ಅರ್ಜಿ ಶುಲ್ಕವನ್ನು ಪಾವತಿಸಲು ವಿಫಲವಾದರೆ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ. SC/ST/CAT-1/ ದೈಹಿಕ ಅಂಗವಿಕಲ ಅಭ್ಯರ್ಥಿಗಳಿಗೆ ಯಾವುದೇ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ.

6. ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:

- ನೆಟ್ ಬ್ಯಾಂಕಿಂಗ್
- ಡೆಬಿಟ್ ಕಾರ್ಡ್
- ಕ್ರೆಡಿಟ್ ಕಾರ್ಡ್
- UPI

7. ಶುಲ್ಕವನ್ನು ಪಾವತಿಸಲು ಕೆಳಗಿನ ವಿಧಾನವನ್ನುಅನುಸರಿಸಿ:

- ಹಂತ 1: ನೀವು ಅರ್ಜಿ ಸಲ್ಲಿಸಲು ಬಯಸುವ ನಿರ್ದಿಷ್ಟ ಅಧಿಸೂಚನೆಗಾಗಿ " APPLY Post" ಲಿಂಕ್‌ಅನ್ನು ಕ್ಲಿಕ್ ಮಾಡಿ
- ಹಂತ 2: ಆಯ್ಕೆಮಾಡಿದಅಧಿಸೂಚನೆಗಾಗಿಅಪ್ಲಿಕೇಶನ್‌ಅನ್ನುಪರಿಶೀಲಿಸಿ.
- ಹಂತ 3: "Pay Now" ಬಟನ್‌ಅನ್ನು ಕ್ಲಿಕ್ ಮಾಡಿ, ಅದು ನಿಮ್ಮನ್ನು ಪಾವತಿ ಪರದೆಗೆ ಮರು ನಿರ್ದೇಶಿಸುತ್ತದೆ. ಅಲ್ಲಿ, ನೀವು UPI, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಮತ್ತು ನೆಟ್ ಬ್ಯಾಂಕಿಂಗ್ ಗಳ ಮೂಲಕ ಪಾವತಿಸಲು ಆಯ್ಕೆ ಮಾಡಬಹುದು.
- ಹಂತ4: ಯಶಸ್ವಿಯಾಗಿ ಪಾವತಿಯಾದಲ್ಲಿ, ಪಾವತಿ ಯಯಶಸ್ಸನ್ನು ದೃಢೀಕರಿಸುವ ಮೂಲಕ
- ನಿಮ್ಮನ್ನು KPSC Udyoga software ಗೆ ಮರು ನಿರ್ದೇಶಿಸಲಾಗುತ್ತದೆ.
- ಹಂತ 5: ನೀವು " Applied Post " ಗ್ರಿಡ್‌ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಬಹುದು.
- ಹಂತ 6: ಪಾವತಿ ವಹಿವಾಟು ವಿಫಲವಾದಲ್ಲಿ, Applied Post ವಿಭಾಗದಲ್ಲಿ "Re-Payment" ಲಿಂಕ್‌ಅನ್ನುಕ್ಲಿಕ್ ಮಾಡಿ ಮತ್ತು ಹಂತ 3 ಅನ್ನುಪುನರಾವರ್ತಿಸಿ.
- ಪಾವತಿವಹಿವಾಟುಮಾಡುವಸಂದರ್ಭದಲ್ಲಿಯಾವುದೇ ಕಾರಣಕ್ಕೂ Browser Close / Refresh or Back button Pressನ್ನು ಮಾಡಬಾರದು.
- ಪಾವತಿಮಾಡುವಸಂದರ್ಭದಲ್ಲಿ Processing / Pending ಬಂದಲ್ಲಿ , ಅಭ್ಯರ್ಥಿಗಳು Payment Complete ಆಗುವವರೆಗೆ ಕಾಯಲು ಸೂಚಿಸಿದೆ. ಇದರ ಬಗ್ಗೆ ಆಯೋಗವನ್ನು ಸಂಪರ್ಕಿಸುವ /ಮೇಲ್ ಅಥವಾ ಮಾಹಿತಿ ಕೇಳುವ ಅವಕಾಶವಿರುವುದಿಲ್ಲ.

8. ಆಯೋಗದ ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ ಆಯೋಗವು ಪರೀಕ್ಷೆಯನ್ನು ನಿಗದಿಪಡಿಸಿದಾಗ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ನೀವು ಸೂಚನೆಯನ್ನು ಸ್ವೀಕರಿಸುತ್ತೀರಿ.

**3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನುಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |

| | | | |
|---|---|---|---|
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಉ.ಮೂ.ವೃ | ಉಳಿಕೆ ಮೂಲ ವೃಂದ | RPC | Residual Parent Cadre |
| ತೃ.ಲಿ | ತೃತೀಯ ಲಿಂಗ | TG | Transgender |

## 4. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

4.1 ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನುಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 5. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |
| (ಉ) | ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ |

| | |
|---|---|
| (ಊ) | ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು, ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ, ನೇಮಕಾತಿಗೆ ಅರ್ಹರಾಗುವುದಿಲ್ಲ. |

6. ಪರೀಕ್ಷೆಯ ಪ್ರಯತ್ನಗಳು:-

1997ರ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ ನಿಯಮಗಳಡಿ ವಯೋಮಿತಿಯ ಷರತ್ತಿಗೊಳಪಟ್ಟಂತೆ ಕೆಳಕಂಡಂತೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರಯತ್ನಗಳನ್ನು ನಿಗದಿಪಡಿಸಲಾಗಿದೆ.

| ಮೀಸಲಾತಿ | ಪ್ರಯತ್ನಗಳು |
|---|---|
| ಸಾಮಾನ್ಯ ಅರ್ಹತೆ (General Merit)ಅಭ್ಯರ್ಥಿಗಳಿಗೆ | 05 ಬಾರಿ |
| ಪ್ರವರ್ಗ (1), ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಅಭ್ಯರ್ಥಿಗಳಿಗೆ | 07 ಬಾರಿ |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ | ಪ್ರಯತ್ನಗಳ ಮಿತಿ ಇರುವುದಿಲ್ಲ. |

ಸೂಚನೆ: ಪೂರ್ವಭಾವಿ ಪರೀಕ್ಷೆಯ ಪ್ರತಿಯೊಂದು ಪ್ರಯತ್ನವನ್ನು ಒಂದು ಅವಕಾಶವೆಂದು ಪರಿಗಣಿಸಲಾಗುವುದು. ನಿಗದಿತ ಪ್ರಯತ್ನಗಳ ಮಿತಿಯನ್ನು ಮೀರಿದಲ್ಲಿ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು.

7. ಶೈಕ್ಷಣಿಕವಿದ್ಯಾರ್ಹತೆ :-

ಕಂಡಿಕೆ 05ರಲ್ಲಿ ತಿಳಿಸಿರುವ ಅರ್ಹತಾ ಷರತ್ತುಗಳ ಜೊತೆಗೆ ಈ ಕೆಳಕಂಡ ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

| | |
|---|---|
| ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) ನಿಯಮಗಳು, 1997 ಹಾಗೂ (8ನೇ ತಿದ್ದುಪಡಿ) ನಿಯಮಗಳು 2010 ರ ನಿಯಮ 7 ರಂತೆ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ವಿಶ್ವವಿದ್ಯಾಲಯದ ಸ್ನಾತಕ ಅಥವಾ ಸ್ನಾತಕೋತ್ತರ ಪದವಿಯನ್ನು ಹೊಂದಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು. | As per Rule 7 of Karnataka Recruitment of Gazetted Probationers (Appointment by Competitive Examinations) Rules, 1997 and (8th Amendment) Rules, 2010 'No candidate shall be eligible for recruitment under these rules unless he /she possesses a Bachelor's Degree or Master 's Degree awarded by a University established by Law in India or possesses an equivalent qualification. |
| ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) ನಿಯಮಗಳು, 1997 ಹಾಗೂ (6ನೇ ತಿದ್ದುಪಡಿ) ನಿಯಮಗಳು 2009 ರಲ್ಲಿ ನಿಯಮ 7 ರ ಉಪ ನಿಯಮ (1) ರ ನಂತರ ಈ ಕೆಳಕಂಡಂತೆ ಸೇರ್ಪಡೆ ಮಾಡಲಾಗಿದೆ:<br>'ಪರಂತು, ಅಭ್ಯರ್ಥಿಗಳು ಯಾವುದಾದರೂ ಪರೀಕ್ಷೆಗೆ ಹಾಜರಾಗಿದ್ದು, ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಶೈಕ್ಷಣಿಕವಾಗಿ ಅರ್ಹರಾಗುವುದಾದಲ್ಲಿ, ಆದರೆ ಆ ಪರೀಕ್ಷೆಯ ಫಲಿತಾಂಶ ಪ್ರಕಟಗೊಳ್ಳದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ. | (As per Karnataka Recruitment of Gazetted Probationers (Appointment by Competitive Examinations) (6th Amendment) Rules, 2009 after sub rule (1) of rule (7) the following has been substituted:-<br>Provided that, candidates who have appeared for an examination, passing of which would render them educationally qualified for preliminary examination conducted by the Commission, but |

| | |
|---|---|
| ಗೆಜೆಟೆಡ್ ಪ್ರೊಬೇಷನರುಗಳ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳಬಹುದೆಂದು ಆಯೋಗವು ಘೋಷಿಸಿದ ಅರ್ಹರಾದ ಎಲ್ಲಾ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸುವಾಗ ಸಂಬಂಧಿಸಿದ ವಿದ್ಯಾರ್ಹತಾ ಪರೀಕ್ಷೆಯನ್ನು ಪಾಸು ಮಾಡಿರುವ ಬಗ್ಗೆ ಪ್ರಮಾಣ ಪತ್ರವನ್ನು ಅಪ್ಲೋಡ್ ಮಾಡತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡುವುದಿಲ್ಲ. ಪರಂತು, ಅಭ್ಯರ್ಥಿಗಳು ಗೆಜೆಟೆಡ್ ಪ್ರೊಬೇಷನರುಗಳ ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸುವಾಗ ಅವರುಗಳು ವೃತ್ತಿ ಶಿಕ್ಷಣದ ಅಂತಿಮ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಅಥವಾ ಇತರೆ ವೈದ್ಯಕೀಯ ಶಿಕ್ಷಣ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು, ಆದರೆ ಪ್ರಶಿಕ್ಷಣಾವಧಿಯನ್ನು ಪೂರೈಸದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ತಾತ್ಕಾಲಿಕವಾಗಿ ಪರೀಕ್ಷೆಗೆ ಪ್ರವೇಶ ನೀಡಲಾಗುವುದು. ಆದರೆ, ಅವರುಗಳು ಅರ್ಜಿಯ ಜೊತೆಯಲ್ಲಿ ವಿಶ್ವವಿದ್ಯಾಲಯ/ಸಂಸ್ಥೆಯ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ವೈದ್ಯಕೀಯ ವೃತ್ತಿ ಪರೀಕ್ಷೆಯಲ್ಲಿ ಅಂತಿಮವಾಗಿ ಪಾಸು ಮಾಡಿರುವ ಬಗ್ಗೆ ನೀಡಿದ ಪ್ರಮಾಣ ಪತ್ರದ ಪ್ರತಿಯನ್ನು ಒದಗಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಅಭ್ಯರ್ಥಿಗಳು ಮೌಖಿಕ ವ್ಯಕ್ತಿತ್ವ ಪರೀಕ್ಷೆಯ ಸಮಯದಲ್ಲಿ ಪದವಿ ಪ್ರದತ್ತ ಮಾಡಿದ ಮೂಲ ಪ್ರಮಾಣ ಪತ್ರ ಅಥವಾ ವಿಶ್ವವಿದ್ಯಾಲಯ/ಸಂಸ್ಥೆಯ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ವೃತ್ತಿ ಪರೀಕ್ಷೆಯ ಎಲ್ಲಾ ಅವಶ್ಯಕತೆಗಳನ್ನು ಪೂರೈಸಿರುತ್ತಾರೆ (ಪ್ರಶಿಕ್ಷಣಾವಧಿಯನ್ನು ಪೂರೈಸಿರುವ ಬಗ್ಗೆಯೂ ಸೇರಿದಂತೆ) ಎಂದು ಪದವಿ ಪ್ರದತ್ತ ಮಾಡಲು ನೀಡುವ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು. | the results of which have not been declared, are also eligible for admission to such preliminary examination.<br>All candidates who are declared qualified by the Commission for taking the Gazetted Probationers (Main) Examination shall be required to produce proof of passing the requisite Examination along with their application of the Main examination failing which such candidates shall not be admitted to the Main examination.<br>Provided further that, candidates who have passed the final professional year or any other medical examination but have not completed their internship at the time of submission of their applications for the Gazetted Probationers (Main) Examination, will be provisionally admitted to the examination provided they submit along with their application a copy of certificate from the concerned authority of the University/Institution that they had passed the requisite final professional medical examination.<br>In such cases, the candidates shall be required to upload and produce at the time of their interview original degree or a certificate from the competent authority of the University/Institution that they have completed all requirements (including completion of internship) for the award of the Degree. |

<u>ವಿಶೇಷ ಸೂಚನೆ</u>:- ಅಭ್ಯರ್ಥಿಯು ಸಂಬಂಧಿಸಿದ ವಿದ್ಯಾರ್ಹತೆ ಪರೀಕ್ಷೆಯನ್ನು ಪಾಸು ಮಾಡಿರುವ ಬಗ್ಗೆ ಅಂತರ್ಜಾಲದಿಂದ ಡೌನ್‌ಲೋಡ್ ಮಾಡಿಕೊಂಡಿರುವ ಅಂಕಪಟ್ಟಿಗಳನ್ನು ಕಂಟ್ರೋಲರ್/ರಿಜಿಸ್ಟ್ರಾರ್ ರವರಿಂದ ದೃಢೀಕರಿಸಿ (Attested) ಒದಗಿಸತಕ್ಕದ್ದು.

8. <u>ವಯೋಮಿತಿ:</u>-

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | | |
|---|---|---|
| ಕನಿಷ್ಠ | | 21 ವರ್ಷ |
| ಗರಿಷ್ಠ | 1. ಸಾಮಾನ್ಯ ಅರ್ಹತೆಯಅಭ್ಯರ್ಥಿಗಳಿಗೆ | 38 ವರ್ಷಗಳು |
| | 2. ಪ್ರವರ್ಗ 2ಎ/2ಬಿ/3ಎ/3ಬಿಅಭ್ಯರ್ಥಿಗಳಿಗೆ | 41 ವರ್ಷಗಳು |
| | 3. ಪರಿಶಿಷ್ಟ ಜಾತಿ/ಪರಿಶಿಷ್ಟಪಂಗಡ/ಪ್ರವರ್ಗ-1 ಅಭ್ಯರ್ಥಿಗಳಿಗೆ | 43 ವರ್ಷಗಳು |
| ❖ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 138 ಎಸ್‌ಎಸ್ ಸಿ 2023, ದಿನಾಂಕ:24-01-2024 ರನ್ವಯ ಈ ಅಧಿಸೂಚನೆಯಲ್ಲಿ ಈಗಿರುವ ನಿಯಮಗಳ ಮೇಲೆ ಎಲ್ಲಾ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಒಂದು ಬಾರಿ (One time Measure) ಗರಿಷ್ಠ ವಯೋಮಿತಿಯನ್ನು Upper age limit ಮೂರು ವರ್ಷಗಳಿಗೆ ಹೆಚ್ಚಿಸಿ ಆದೇಶಿಸಿರುತ್ತದೆ. ಅದರಂತೆ ಮೇಲಿನ ವಯೋಮಿತಿಯನ್ನು ನಿಗದಿಪಡಿಸಿದೆ. | | |

<u>ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು</u>

| | |
|---|---|
| (ಅ) ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಆ) ಅಂಗವಿಕಲ ಅಭ್ಯರ್ಥಿಗಳಿಗೆ<br>{ಅಂಗವಿಕಲ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 104 ಸೆನೆನಿ 2005 ದಿನಾಂಕ 13-09-2005 ರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 115 ಸೆನೆನಿ 2005, ದಿನಾಂಕ:19-11-2005 ರಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು (ಈ ಪ್ರಮಾಣಪತ್ರದ ನಮೂನೆಯನ್ನು ಅನುಬಂಧ-2 ರಲ್ಲಿ ತೋರಿಸಲಾಗಿದೆ.) | 10 ವರ್ಷಗಳು |
| (ಇ) ವಿಧವೆಯಾಗಿದ್ದಲ್ಲಿ (ವಿಧವೆಯರು "ವಿಧವೆ" ಎಂಬ ಬಗ್ಗೆ ತಹಶೀಲ್ದಾರ್ ಕಛೇರಿಯಿಂದ ಪಡೆದ ಮೃತರ ಕುಟುಂಬದ ಜೀವಂತ ಸದಸ್ಯರ ದೃಢೀಕರಣ ಪ್ರಮಾಣ ಪತ್ರವನ್ನು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |

ವಿವರಣೆ:-ಜನ್ಮದಿನಾಂಕಕ್ಕಾಗಿಎಸ್.ಎಸ್.ಎಲ್.ಸಿ. ಅಥವಾತತ್ಸಮಾನವಿದ್ಯಾರ್ಹತೆಯಅಂಕಪಟ್ಟಿಎಸ್.ಎಸ್.ಎಲ್.ಸಿ ವರ್ಗಾವಣೆ ಪ್ರಮಾಣಪತ್ರ (ಟಿ..ಸಿ)/ಎಸ್.ಎಸ್.ಎಲ್.ಸಿ.ಯಸಂಚಿತದಾಖಲೆ (ಕ್ಯುಮುಲೇಟಿವ್ ರೆಕಾರ್ಡ್) ನಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಆಯೋಗವು ಒಪ್ಪಿಕೊಳ್ಳುವುದು.ಇತರೆ ಯಾವುದೇ ದಾಖಲೆಗಳನ್ನುಪರಿಗಣಿಸಲಾಗುವುದಿಲ್ಲ.

9. ದೈಹಿಕ ದಾರ್ಢ್ಯತೆ:

ಈ ಕೆಳಕಂಡ ಹುದ್ದೆಗಳಿಗೆ ನಿರ್ದಿಷ್ಟವಾದ ದೈಹಿಕ ದಾರ್ಢ್ಯತೆಯನ್ನು ನಿಗದಿಪಡಿಸಿದ್ದು ಅಂತಹ ದೈಹಿಕ ದಾರ್ಢ್ಯತೆಯನ್ನು ಹೊಂದಿದ್ದಲ್ಲಿ ಮಾತ್ರ ಅಂತಹ ಹುದ್ದೆಗಳಿಗೆ ನೇಮಕಗೊಳ್ಳಲು ಅಭ್ಯರ್ಥಿಯು ಅರ್ಹತೆ ಪಡೆಯುತ್ತಾನೆ/ಳೆ.

| ಕ್ರ. ಸಂ. | ಸೇವೆ | ಪುರುಷ | | | | ಮಹಿಳೆ | | |
|---|---|---|---|---|---|---|---|---|
| | | ಎತ್ತರ | ಎದೆಯ ಸುತ್ತಳತೆ | ವಿಸ್ತರಣೆ (ಎದೆಯನ್ನು ಪೂರ್ಣವಾಗಿ ವಿಸ್ತರಿಸಿದಾಗ) | ತೂಕ | ಎತ್ತರ | ಎದೆಯ ಸುತ್ತಳತೆ | ತೂಕ |
| 01 | ಕರ್ನಾಟಕ ಪೋಲೀಸ್ ಸೇವೆ ಡಿ.ವೈ.ಎಸ್.ಪಿ. (ಸಿವಿಲ್) (ಗ್ರೂಪ್ ಎ) | 165 ಸೆ.ಮೀ | 84 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | ಮಹಿಳೆಯ ಎತ್ತರಕ್ಕೆ ತಕ್ಕಂತೆ, ಆದರೆ 46 ಕೆ.ಜಿ.ಗೆ ಕಡಿಮೆ ಇಲ್ಲದಂತೆ |
| 02 | ಕರ್ನಾಟಕ ಕಾರಾಗೃಹ ಸೇವೆ | 168 ಸೆ.ಮೀ | 86 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | -ಅದೇ- |
| 03 | ಅಬಕಾರಿ ಉಪ ಅಧೀಕ್ಷಕರು | 163 ಸೆ.ಮೀ | 81 ಸೆ.ಮೀ | 5 ಸೆ.ಮೀ | ಅನ್ವಯ ವಾಗುವುದಿಲ್ಲ | 157 ಸೆ.ಮೀ | ಅನ್ವಯ ವಾಗುವುದಿಲ್ಲ | 49 ಕೆ.ಜಿ. |

10. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:-

ಈ ಸ್ಪರ್ಧಾತ್ಮಕ ಪರೀಕ್ಷೆಯು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕನೇಮಕಾತಿ) ನಿಯಮ 1997ರ ಷೆಡ್ಯೂಲ್ 2 ರಲ್ಲಿ ತಿಳಿಸಿರುವಂತೆ ಎರಡು ಹಂತಗಳನ್ನು ಒಳಗೊಂಡಿರುತ್ತದೆ:

(1) ಪೂರ್ವಭಾವಿ ಪರೀಕ್ಷೆಯನ್ನು (Preliminary Examination) ಮುಖ್ಯ ಪರೀಕ್ಷೆಗೆ (Main Examination) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆಸಲಾಗುವುದು ಮತ್ತು ಮುಖ್ಯ ಪರೀಕ್ಷೆಯನ್ನು ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನು ವಿವಿಧ ಸೇವೆಗಳು ಮತ್ತು ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆಸಲಾಗುವುದು.

(2) ಹೆಚ್ಚಿನ ವಿವರಗಳಿಗೆ ನಿಯಮಗಳನ್ನು ನೋಡಲು ಸೂಚಿಸಿದೆ. ಈ ನಿಯಮಗಳು ಆಯೋಗದವೆಬ್‌ಸೈಟ್ http://kpsc.kar.nic.inನಲ್ಲಿ ಲಭ್ಯವಿರುತ್ತದೆ .

10.1ಪೂರ್ವಭಾವಿ ಪರೀಕ್ಷೆ:-

| | |
|---|---|
| ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ( 9ನೇ ತಿದ್ದುಪಡಿ) ನಿಯಮಗಳು, 2011 ರಂತೆ ಪೂರ್ವಭಾವಿ ಪರೀಕ್ಷೆಯು ವಸ್ತುನಿಷ್ಠ (ಬಹು ಆಯ್ಕೆ) ಮಾದರಿಯ ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ. "As per Karnataka Recruitment of Gazetted Probationers (Appointment by Competitive Examinations) (9th Amendment) Rules, 2011 (A) Preliminary Examination - The Preliminary Examination shall consist of two papers of objective type (multiple choice) " | |
| (i) ಪ್ರತಿ ಪ್ರಶ್ನೆಗೆ ಎರಡು ಅಂಕಗಳಂತೆ ಪ್ರತಿ ಪತ್ರಿಕೆಯು 100 ಪ್ರಶ್ನೆಗಳನ್ನೊಳಗೊಂಡಿರುತ್ತದೆ | (i) each paper carrying 100 questions with each question carrying two marks; and |

| | |
|---|---|
| (ii)) ಪ್ರತಿ ಪತ್ರಿಕೆಯು ಗರಿಷ್ಠ 200 ಅಂಕಗಳು ಮತ್ತು ಎರಡು ಗಂಟೆಗಳ ಕಾಲಾವಧಿಯದ್ದಾಗಿದ್ದು (ಎರಡು ಪತ್ರಿಕೆಗಳಿಗೆ ಒಟ್ಟು 400 ಅಂಕಗಳು) ವಿವರ ಈ ಕೆಳಕಂಡಂತಿರುತ್ತದೆ:- | (ii) each paper shall be of a maximum of 200 marks and of a duration of two hours (Total for two papers 400 marks) in the following description, namely; |

| ಕ್ರ.ಸಂ. Sl.No. | ವಿಷಯ / Subject Area | ಪ್ರಶ್ನೆಗಳ ಸಂಖ್ಯೆ/ No. of questions | ಅಂಕಗಳು/ Marks |
|---|---|---|---|
| | ಪತ್ರಿಕೆ -1 | | |
| 01 | ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳನ್ನು ಒಳಗೊಂಡಂತೆ ಸಾಮಾನ್ಯ ಅಧ್ಯಯನ/ General studies related to National and International importance | 40 | 80 |
| 02 | ಮಾನವಿಕ ಶಾಸ್ತ್ರ / Humanities | 60 | 120 |
| | ಒಟ್ಟು | 100 | 200 |

| | | | |
|---|---|---|---|
| | ಪತ್ರಿಕೆ -2 | | |
| 01 | ರಾಜ್ಯದ ಪ್ರಾಮುಖ್ಯತೆಗೆ ಸಂಬಂಧಿಸಿದಂತೆ ಸಾಮಾನ್ಯ ಅಧ್ಯಯನ /General studies related to State importance | 40 | 80 |
| 02 | ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ /General Science & Technology Environment & Ecology | 30 | 60 |
| 03 | ಸಾಮಾನ್ಯ ಮನೋಸಾಮರ್ಥ್ಯ/ General Mental Ability | 30 | 60 |
| | ಒಟ್ಟು | 100 | 200 |

| | |
|---|---|
| **ಟಿಪ್ಪಣಿ:-** (ಅ)ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತದೆ. | **Note:** (a) The question paper shall be set both in Kannada and English. |
| (ಆ)ಪೂರ್ವಭಾವಿ ಪರೀಕ್ಷೆಯಲ್ಲಿನ ಸಾಮಾನ್ಯ ಮನೋ (ಬೌದ್ಧಿಕ) ಸಾಮರ್ಥ್ಯದ ಪ್ರಶ್ನೆಗಳ ಮಟ್ಟವು ಎಸ್‌ಎಸ್‌ಎಲ್‌ಸಿ/10ನೇ ತರಗತಿಯ ಮಟ್ಟದ್ದಾಗಿರುತ್ತದೆ ಮತ್ತು ಉಳಿದ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತವೆ | (b) The standard of General Mental Ability questions of preliminary examination (aptitude test) shall be that of X standard /SSLC level and the remaining papers are of Degree Level. |
| (ಇ) ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ 1:15 ಅನುಪಾತದಲ್ಲಿ ಜಾರಿಯಲ್ಲಿರುವ ಮೀಸಲಾತಿ ನೀತಿಯನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳು ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಸಾಕಷ್ಟು ಅಭ್ಯರ್ಥಿಗಳನ್ನು ಅದೇ ಅನುಪಾತದಲ್ಲಿ ಪೂರ್ವಭಾವಿ ಪರೀಕ್ಷೆಯಲ್ಲಿ ಅವರು | (c) The number of candidates to be admitted to the main examination shall be 15 times the vacancies notified for recruitment in the order of merit on the basis of the performance in the preliminary examination subject to accommodating the same ratio in adequate |

| | |
|---|---|
| ಗಳಿಸಿದ ಒಟ್ಟು ಅಂಕಗಳ ಆಧಾರದ ಮೇಲೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡಲಾಗುತ್ತದೆ. | number of candidates belonging to the categories of Scheduled Caste, Scheduled Tribe, each of the other Backward Classes and others. |
| ಋಣಾತ್ಮಕ ಮೌಲ್ಯಮಾಪನ:- ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) (10ನೇ ತಿದ್ದುಪಡಿ) ನಿಯಮಗಳು 2013, ಅಧಿಸೂಚನೆ ಸಂಖ್ಯೆ: DPAR 118 SRR 2012, dated 12-02-2013 ರಂತೆ.<br>(ಡಿ) ಋಣಾತ್ಮಕ ಮೌಲ್ಯಮಾಪನ ಒಳಗೊಂಡ ಕೆಲವೊಂದು ಪ್ರಶ್ನೆಗಳಿಗೆ, ಅಂದರೆ, ಅತಿ ಸೂಕ್ತವಾದ ಉತ್ತರಕ್ಕೆ ಹಾಗೂ ಸೂಕ್ತವಲ್ಲದ ಉತ್ತರಕ್ಕೆ ಬೇರೆ ಬೇರೆ ಅಂಕಗಳನ್ನು ನೀಡಲಾಗುತ್ತಿರುವ ಪ್ರಶ್ನೆಗಳನ್ನು ಹೊರತುಪಡಿಸಿ ಎಲ್ಲಾ ತಪ್ಪು ಉತ್ತರಗಳಿಗೆ ಋಣಾತ್ಮಕ ಮೌಲ್ಯಮಾಪನ (ಕೆಳಗೆವಿವರಿಸಿದಂತೆ) ಇರುತ್ತದೆ:-<br>(i) ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ತಪ್ಪು ಉತ್ತರ ನೀಡಿರುವ ಪ್ರತಿಯೊಂದು ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ 0.25 ರಷ್ಟು ಅಂಕಗಳನ್ನು (¼ ರಷ್ಟು) ಅಂಕಗಳನ್ನು ಕಳೆಯಲಾಗುವುದು. | Negative Evaluation: As per Karnataka Recruitment of Gazetted Probationers (Appointment by Competitive Examinations) (10th Amendment) Rules, 2013, Notification No.DPAR 118 SRR 2012, dated 12-02-2013.<br>" (d) There shall be negative marking for incorrect answers (as detailed below) for all questions except some of the questions where the negative marking shall be inbuilt in the form of different marks being awarded to the most appropriate and not so appropriate answer for such questions, namely:-<br>(i) There are four alternative answers to every question. For each question, of which a wrong answer has been given by the candidate, one-fourth (0.25) of the marks assigned to that question shall be deducted as penalty; |
| (ii)ಅಭ್ಯರ್ಥಿಯು ಒಂದೇ ಪ್ರಶ್ನೆಗೆ ಒಂದಕ್ಕಿಂತ ಹೆಚ್ಚಿನ ಉತ್ತರಗಳನ್ನು ನಮೂದಿಸಿದ್ದು ಹಾಗೂ ಅದರಲ್ಲಿ ನಮೂದಿಸಿರುವ ಒಂದು ಉತ್ತರವು ಸರಿಯಾಗಿದ್ದರೂ ಸಹ ಅದನ್ನು ತಪ್ಪು ಉತ್ತರವೆಂದು ಪರಿಗಣಿಸಿ ಮೇಲ್ಕಂಡ (i) ರಂತೆ ಅಂಕಗಳನ್ನು ಕಳೆಯಲಾಗುವುದು.<br>(iii) ಅಭ್ಯರ್ಥಿಯು ಯಾವುದೇ ಪ್ರಶ್ನೆಯನ್ನು ಖಾಲಿ ಬಿಟಿ ದ್ದಲ್ಲಿ , ಅಂದರೆ ಯಾವುದೇ ಉತ್ತರ ನೀಡದಿದ್ದಲ್ಲಿ, ಅಂತಹ ಪ್ರಶ್ನೆಗೆ ಋಣಾತ್ಮಕ ಅಂಕಗಳನ್ನ ಕಳೆಯಲಾಗುವುದಿಲ್ಲ. | (ii) If a candidate gives more than one answer to a question, it shall be treated as a wrong answer even if one of the given answers happen to be correct and there shall be same penalty in accordance with clause (i);<br>(iii) If a question is left blank i.e. no answer is given by the candidate, there shall be no penalty for that question. " |

10.2ಪರೀಕ್ಷೆಯ ಪಠ್ಯ ಕ್ರಮ

| ಪೂರ್ವಭಾವಿ ಪರೀಕ್ಷೆ: (ವಸ್ತುನಿಷ್ಠ ಮಾದರಿ)<br>ಪತ್ರಿಕೆ-1 | PRELIMINARY EXAMINATION (objective type):<br>PAPER – I |
|---|---|
| (i) ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಹತ್ವದ ಪ್ರಚಲಿತ ವಿದ್ಯಮಾನಗಳು.<br>(ii) ಮಾನವಿಕ ಶಾಸ್ತ್ರ -ಭಾರತದ ಇತಿಹಾಸ- ಕರ್ನಾಟಕವನ್ನು | (i) Current events of National and International importance. |

| | |
|---|---|
| ಪ್ರಾಮುಖ್ಯವಾಗಿರಿಸಿಕೊಂಡು ಭಾರತದ ರಾಷ್ಟ್ರೀಯ ಚಳುವಳಿಗೆ ಹೆಚ್ಚಿನ ಗಮನ ನೀಡಿ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜಕೀಯವಾಗಿ ಇತಿಹಾಸ ವಿಷಯದ ಬಗ್ಗೆ ಅಭ್ಯರ್ಥಿಯ ವಿಸ್ತಾರವಾದ ಸಾಮಾನ್ಯ ತಿಳುವಳಿಕೆ.<br>(iii) ಕರ್ನಾಟಕದ ಬಗ್ಗೆ ಹೆಚ್ಚಿನ ಗಮನ ನೀಡುವುದರೊಂದಿಗೆ ಜಾಗತಿಕ ಭೂಗೋಳ ಶಾಸ್ತ್ರ ಮತ್ತು ಭಾರತದ ಭೂಗೋಳ ಶಾಸ್ತ್ರ.<br>(iv) ದೇಶದ ರಾಜಕೀಯ ವ್ಯವಸ್ಥೆ, ಗ್ರಾಮೀಣಾಭಿವೃದ್ಧಿ, ಭಾರತದ ನಿರಂತರ ಅಭಿವೃದ್ಧಿಗೆ ಯೋಜನೆ ಮತ್ತು ಆರ್ಥಿಕ ಸುಧಾರಣೆಗಳು, ಬಡತನ ನಿರ್ಮೂಲನೆ, ಜನಸಂಖ್ಯಾಶಾಸ್ತ್ರ, ಸಾಮಾಜಿಕ ಬದಲಾವಣೆಗಳನ್ನು ಒಳಗೊಂಡಂತೆ ಭಾರತದ ರಾಜಕೀಯ ಮತ್ತು ಆರ್ಥಿಕ ವ್ಯವಸ್ಥೆ. | (ii) Humanities – History of India – Emphasis shall be on broad general understanding of the subject in itssocial, economic, cultural and political aspects with a focus on Indian national movement with special emphasis on Karnataka.<br><br>(iii) World Geographyand Geography of India with a focus on Karnataka.<br><br>(iv) Indian polity and economy, including the country's political system, rural development, planning and economic reforms in India- sustainable development, poverty alleviation, demographics, social sector initiatives etc., |
| ಪತ್ರಿಕೆ-2<br>(i) ರಾಜ್ಯದ ಪ್ರಾಮುಖ್ಯತೆಯ ಪ್ರಸ್ತುತದ ಘಟನೆಗಳು ಮತ್ತು ರಾಜ್ಯ ಸರ್ಕಾರದ ಪ್ರಮುಖ ಯೋಜನೆಗಳು.<br>(ii) ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ- ವಿಷಯದಲ್ಲಿ ಪ್ರಾವೀಣ್ಯತೆ ಬೇಕಾಗಿಲ್ಲದೆ ಆರೋಗ್ಯ, ಪರಿಸರ ವಿಜ್ಞಾನ, ಜೈವಿಕ ವೈವಿಧ್ಯತೆ ಮತ್ತು ಹವಾಮಾನದಲ್ಲಿ ಬದಲಾವಣೆಗಳು ಇವುಗಳನ್ನೊಳಗೊಂಡಂತೆ ಯಾವುದೇ ವಿಜ್ಞಾನ ವಿಷಯವನ್ನು ವಿಶೇಷವಾಗಿ ಅಧ್ಯಯನ ಮಾಡದಿರುವ ಒಬ್ಬ ಸುಶಿಕ್ಷಿತ ವ್ಯಕ್ತಿಯಿಂದ ನಿರೀಕ್ಷೆ ಮಾಡುವಂತೆ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ದೈನಂದಿನ ಅನುಭವಗಳು/ ಅವಲೋಕನೆಗಳು/ ಪರಿಣಾಮಗಳು ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಸಮಕಾಲೀನ ಬೆಳವಣಿಗೆಗಳು.<br>(iii) ಸಾಮಾನ್ಯ ಮನೋ ಸಾಮರ್ಥ್ಯ- ಮನೋಶಕ್ತಿ, ಗ್ರಹಿಸುವಿಕೆ, ತಾರ್ಕಿಕ ಪ್ರತಿಪಾದನೆ ಮತ್ತು ವಿಶ್ಲೇಷಣಾ ಸಾಮರ್ಥ್ಯ, ನಿರ್ಧಾರ ತೆಗೆದುಕೊಳ್ಳುವಿಕೆ, ಸಮಸ್ಯೆ ಬಿಡಿಸುವಿಕೆ, ಮೂಲ ಗಣಿತ ಜ್ಞಾನ (ಸಂಖ್ಯೆಗಳು ಮತ್ತು ಅವುಗಳ ಸಂಬಂಧಗಳು, ಅವುಗಳ ಪರಿಮಾಣ ಇತ್ಯಾದಿ) ಮತ್ತು ದತ್ತಾಂಶದ ವ್ಯಾಖ್ಯಾನ (ನಕ್ಷೆಗಳು, ರೇಖಾಚಿತ್ರಗಳು, ಕೋಷ್ಟಕಗಳು, ದತ್ತಾಂಶ ದಕ್ಷತೆ, ಇತ್ಯಾದಿ( ಹತ್ತನೇ ತರಗತಿ / ಎಸ್.ಎಸ್.ಎಲ್.ಸಿ ಪರೀಕ್ಷೆ ಮಟ್ಟದಲ್ಲಿ). | PAPER – II<br>(i) Current events of State importance and important State Government programmes.<br><br>(ii) General Science & Technology, Environment & Ecology-contemporary developments in science and technology and their implications including matters of everyday observations and experience, as may be expected of a well educated person who has not made a special study of any scientific discipline general issues on Health, environmental ecology, biodiversity and climate change that do not require subject specialization.<br><br>(iii) General Mental Ability,- Comprehension, Logical reasoning and Analytical ability, Decision making, problem solving, Basic innumeracy (numbers and their relations, order of magnitude etc.,) and data interpretation (charts, graphs, tables, data sufficiency etc., (class X/SSLC level)". |

10.3 ಮುಖ್ಯ ಪರೀಕ್ಷೆ:- ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) (11ನೇ ತಿದ್ದುಪಡಿ) ನಿಯಮಗಳು, 2014, ಅಧಿಸೂಚನೆ ಸಂಖ್ಯೆ:ಡಿಪಿಎಆರ್ 235 ಎಸ್ ಆರ್ ಆರ್ 2013, ದಿನಾಂಕ: 24-11-2014ರಂತೆ ಮತ್ತು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಗಳು, 2020, ಅಧಿಸೂಚನೆ ಸಂಖ್ಯೆ: ಡಿಪಿಎಆರ್ 151 ಸೇಲೋಸೇ 2014, ದಿನಾಂಕ:04-06-2020ರಂತೆ ಮುಖ್ಯ ಪರೀಕ್ಷೆಯು ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನು ಒಳಗೊಂಡಿರುತ್ತದೆ [Karnataka Recruitment of Gazetted Probationers (Appointment by Competitive Examinations) (11th Amendment) Rules, 2014, Notification No. DPAR 235 SRR 2013, dated 24-11-2014 and Karnataka Recruitment of Gazetted Probationers (Appointment by Competitive Examinations) (Amendment) Rules, 2020, Notification No. DPAR 151 SeLoSe 2014, dated :04-06-2020 the Main Examination shall consist of written examination and personality test " ಮತ್ತು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕಪರೀಕ್ಷೆ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಗಳು 2022, ಅಧಿಸೂಚನೆ ಸಂಖ್ಯೆ:ಡಿಪಿಎಆರ್ 20 ಎಸ್‌ಎಸ್ ಸಿ 2022, ದಿನಾಂಕ:12-04-2022].

ಲಿಖಿತ ಪರೀಕ್ಷೆ/ Written Examination:-

| ಪತ್ರಿಕೆಗಳು/Papers | ವಿಷಯ/Subject | ಅಂಕಗಳು/ marks | ಅವಧಿ Duration (ಗಂಟೆಗಳು/ hours) |
|---|---|---|---|
| ಅರ್ಹತಾದಾಯಕ ಪತ್ರಿಕೆಗಳು/ Qualifying Papers | ಕನ್ನಡ / Kannada | 150 | 2 |
| | ಇಂಗ್ಲೀಷ್ /English | 150 | 2 |

| | | | | |
|---|---|---|---|---|
| ಕಡ್ಡಾಯ ಪತ್ರಿಕೆಗಳು / Compulsory Papers | ಪತ್ರಿಕೆ -1/ Paper-1 | ಪ್ರಬಂಧ /Essay | 250 | 3 |
| | ಪತ್ರಿಕೆ -2 / Paper -2 | ಸಾಮಾನ್ಯ ಅಧ್ಯಯನ /General Studies -1 | 250 | 3 |
| | ಪತ್ರಿಕೆ -3 / Paper -3 | ಸಾಮಾನ್ಯ ಅಧ್ಯಯನ/General Studies -2 | 250 | 3 |
| | ಪತ್ರಿಕೆ -4 / Paper -4 | ಸಾಮಾನ್ಯ ಅಧ್ಯಯನ /General Studies -3 | 250 | 3 |
| | ಪತ್ರಿಕೆ -5 / Paper -5 | ಸಾಮಾನ್ಯ ಅಧ್ಯಯನ/General Studies -4 | 250 | 3 |
| ಲಿಖಿತ ಪರೀಕ್ಷೆಯ ಒಟ್ಟು ಅಂಕಗಳು /Total marks for the written examination | | | 1250 | |
| ವ್ಯಕ್ತಿತ್ವ ಪರೀಕ್ಷೆಯ ಒಟ್ಟು ಅಂಕಗಳು/Total marks for the Personality Test | | | 25 | |
| ಒಟ್ಟು/Total | | | 1275 | |

| ಟಿಪ್ಪಣಿ: | Note: |
|---|---|
| (1) ಕಡ್ಡಾಯ ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳಲ್ಲಿ ಪಡೆದ ಅಂಕಗಳು ಅರ್ಹತಾದಾಯಕ ಸ್ವರೂಪದ್ದಾಗಿರುತ್ತವೆ. ಅರ್ಹತೆ ಪಡೆಯಲು ಈ ಪ್ರತಿಯೊಂದು ಪತ್ರಿಕೆಯಲ್ಲಿ ಕನಿಷ್ಠ ಶೇಕಡ 35 (52.5) ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಈ ಎರಡು ಪತ್ರಿಕೆಗಳಲ್ಲಿ ನಿಗದಿತ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಇತರೆ ಪತ್ರಿಕೆಗಳಲ್ಲಿ ಎಷ್ಟೇ ಹೆಚ್ಚು ಅಂಕಗಳನ್ನು ಗಳಿಸಿದ್ದರೂ ವ್ಯಕ್ತಿತ್ವ ಪರೀಕ್ಷೆಗೆ ಮತ್ತು ಆಯ್ಕೆಗೆ ಅರ್ಹರಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳ ಇತರೆ ವಿಷಯಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ. | (1)The marks obtained in qualifying papers i.e., in Kannada and in English shall be of qualifying nature. For qualifying in these papers, a minimum of 35%(52.5) marks in each paper is prescribed. The marks obtained in these two papers shall not be considered for determining the merit for selection. Candidates who do not secure the prescribed minimum marks in the qualifying papers, namely, Kannada and English, shall not be eligible for personality test and selection. |
| (2) ಮುಖ್ಯ ಪರೀಕ್ಷೆಯು ವಿವರಣಾತ್ಮಕ ಮಾದರಿಯಲ್ಲಿರುತ್ತದೆ ಮತ್ತು ಎಲ್ಲಾ ಪತ್ರಿಕೆಗಳು ಕಡ್ಡಾಯವಾಗಿರುತ್ತವೆ. | (2) The Examination shall be of conventional Descriptive<br>type in nature and all papers are Compulsory. |
| (3) ಪ್ರಶ್ನೆ ಪತ್ರಿಕೆಗಳುಕನ್ನಡ ಮತ್ತುಇಂಗ್ಲೀಷ್ ಭಾಷೆಗಳೆರಡರಲ್ಲೂ ಮುದ್ರಿಸಲಾಗಿರುತ್ತದೆ. ಅಭ್ಯರ್ಥಿಗಳು ಪತ್ರಿಕೆಯ ಉತ್ತರಗಳನ್ನು ಸಂಪೂರ್ಣವಾಗಿ ಕನ್ನಡ ಅಥವಾ ಆಂಗ್ಲಭಾಷಾ ಮಾಧ್ಯಮದಲ್ಲಿಯೇ ಉತ್ತರಿಸತಕ್ಕದ್ದು( ಅರ್ಹತಾದಾಯಕ ಪತ್ರಿಕೆಗಳನ್ನು ಹೊರತುಪಡಿಸಿ). | (3) The question papers shall be set both in Kannada and in English. A candidate may answer a paper either entirely in Kannada or in English(Except qualifying papers). |
| (4) ಮುಖ್ಯ ಪರೀಕ್ಷೆಯ ಕಡ್ಡಾಯ ಕನ್ನಡ ಹಾಗೂ ಕಡ್ಡಾಯ ಆಂಗ್ಲಭಾಷೆ ಪತ್ರಿಕೆಗಳನ್ನು ಹೊರತುಪಡಿಸಿ ಉಳಿದ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತದೆ. ಕಡ್ಡಾಯ ಕನ್ನಡ ಹಾಗೂ ಕಡ್ಡಾಯ ಆಂಗ್ಲಭಾಷೆ ಪತ್ರಿಕೆಗಳು ಎಸ್.ಎಸ್.ಎಲ್.ಸಿಯ ಪ್ರಥಮ ಭಾಷೆಯ ಮಟ್ಟದ್ದಾಗಿರುತ್ತದೆ | (4)The standard of the Main Examination except Qualifying Kannada paper and Qualifying English paper shall be that of Degree level. The standard of qualifying Kannada paper and qualifying English paper shall be that of First Language Kannada and First Language English respectively at SSLC level. |
| (5) ಎಲ್ಲಾ 05 ಪತ್ರಿಕೆಗಳು ಕಡ್ಡಾಯ ಪತ್ರಿಕೆಗಳಾಗಿರುತ್ತವೆ. ಪತ್ರಿಕೆ-(02) ರಿಂದ (05)ರವರೆಗಿನ ಪತ್ರಿಕೆಗಳು ಮೂರು ಭಾಗಗಳನ್ನು ಒಳಗೊಂಡಿರುತ್ತದೆ. ಪ್ರತಿ ಪತ್ರಿಕೆಯು ಗರಿಷ್ಠ 250 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು 03 ಗಂಟೆಗಳ | (5)All five papers are compulsory. Paper II to V consists of three sections. Each paper carries a maximum of 250 marks and duration of three hours only. |

| | |
|---|---|
| ಅವಧಿಯದ್ದಾಗಿರುತ್ತದೆ. | |
| (6) ಲಿಖಿತ ಮತ್ತು ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು ಅಂತಿಮ ಆಯ್ಕೆ ಪಟ್ಟಿಯೊಂದಿಗೆ ಪ್ರಕಟಿಸಲಾಗುವುದು. | (6)Written and Personality Test Marks will be announced along with the final select list |
| (7) ಮುಖ್ಯ ಪರೀಕ್ಷೆಯ ಪಠ್ಯಕ್ರಮವನ್ನು ಆಯೋಗದ ವೆಬ್‌ಸೈಟ್ http:// kpsc. kar.nic.in/Syllabus" ನಲ್ಲಿ ಬಿತ್ತರಿಸಲಾಗಿದೆ. | (7) The syllabi for the main examination is published in Commission's web site "http://kpsc.kar.nic.in/Syllabus |

**ಪ್ರಮುಖ ಸೂಚನೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 151 ಸೆಲೋಸೆ 2014, ದಿನಾಂಕ:04-06-2020ರನ್ವಯ ಮುಖ್ಯ ಪರೀಕ್ಷೆಯ ಐಚ್ಛಿಕವಿಷಯಗಳನ್ನು ಗೆಜೆಟೆಡ್ ಪ್ರೊಬೇಷನರ್ ನೇಮಕಾತಿಯಿಂದ ತೆಗೆದು ಹಾಕಲಾಗಿರುತ್ತದೆ.

10.4 ವ್ಯಕ್ತಿತ್ವಪರೀಕ್ಷೆ:-

ವ್ಯಕ್ತಿತ್ವ ಪರೀಕ್ಷೆಯು ಅಭ್ಯರ್ಥಿಗಳ ವೈಯಕ್ತಿಕ ಗುಣಮಟ್ಟ ಮತ್ತು ಸಿವಿಲ್ ಸೇವೆಗಳಿಗೆ ಸೂಕ್ತರೇ ಎಂಬ ಬಗ್ಗೆ ಅಂದರೆ ನಾಯಕತ್ವದ ಗುಣ, ತೀರ್ಮಾನ ತೆಗೆದುಕೊಳ್ಳುವ ವಿವಿಧ ಮತ್ತು ಆಳವಾದ ಆಸಕ್ತಿ ಒಂದು ಗುಂಪಿನಲ್ಲಿ ಕೆಲಸ ಮಾಡುವ ಸಾಮರ್ಥ್ಯ ಮತ್ತು ಪ್ರೇರಣಾ ಕೌಶಲ್ಯ ಹಾಗೂ ತಾರ್ಕಿಕ ಯೋಚನಾ ಸಾಮರ್ಥ್ಯಗಳ ಬಗ್ಗೆ ನಿರ್ಧರಿಸುತ್ತದೆ.

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕಪರೀಕ್ಷೆಮೂಲಕನೇಮಕಾತಿ) (ತಿದ್ದುಪಡಿ) ನಿಯಮಗಳು 2019ರಂತೆ ಆಯೋಗವು ಗ್ರೂಪ್-'ಎ' ಮತ್ತು 'ಬಿ' ಸೇವೆಗಳ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:3ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು. ಆಯೋಗವು, ಅಭ್ಯರ್ಥಿಗಳು ಮುಖ್ಯಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳ ಜೇಷ್ಠತೆ (merit) ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಲಭ್ಯವಿರುವ ಹುದ್ದೆಗಳಲ್ಲಿ ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ, ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗನುಗುಣವಾಗಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು.ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕಪರೀಕ್ಷೆ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಗಳು 2022, ಅಧಿಸೂಚನೆ ಸಂಖ್ಯೆ:ಡಿಪಿಎಆರ್ 20 ಎಸ್‌ಎಸ್ ಸಿ 2022, ದಿನಾಂಕ: 12-04-2022 ರಂತೆ ವ್ಯಕ್ತಿತ್ವ ಪರೀಕ್ಷೆಯು ಗರಿಷ್ಠ 25 ಅಂಕಗಳನ್ನು ಒಳಗೊಂಡಿರುತ್ತದೆ.

11. ಮೀಸಲಾತಿ /ಇತರೆ ಪ್ರಮಾಣ ಪತ್ರಗಳು:-

| | | |
|---|---|---|
| 11.1 ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು | (ಅ) | ಜಾತಿ ಮೀಸಲಾತಿ ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡತಕ್ಕದ್ದು. |

<table>
<tr><td></td><td>(ಆ)</td><td>ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :-<br><table><tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಡಿ'</td></tr><tr><td>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಇ'</td></tr><tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ`ಎಫ್'</td></tr></table></td></tr>
<tr><td></td><td>(ಇ)</td><td>ಹಿಂದುಳಿದವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.(Government Notification No SWD 155 BCA 2012 Dt:17-02-2012 ರನ್ವಯ)</td></tr>
<tr><td></td><td>(ಈ)</td><td>ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ಚಾಲ್ತಿ ಅವಧಿ ಮಿತಿಯಿಲ್ಲದೇ ಪರಿಗಣಿಸಲಾಗುವುದು(ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012)</td></tr>
<tr><td>11.2<br>ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ</td><td>(ಅ)</td><td>ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001ರನ್ವಯ ಗ್ರಾಮೀಣಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳುಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.</td></tr>
<tr><td></td><td>(ಆ)</td><td>ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.<br>ಮುಂದುವರೆದು, ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನುಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತತಹಶೀಲ್ದಾರ್ ರವರಿಂದ ಪಡೆದಿಟ್ಟು ಕೊಂಡಿರತಕ್ಕದ್ದು ಹಾಗೂ ಅಭ್ಯರ್ಥಿಗಳು ಪಡೆದಿರುವ ಪ್ರಮಾಣಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿ (valid)ಯಲ್ಲಿರತಕ್ಕದ್ದು.</td></tr>
</table>

| | | |
|---|---|---|
| | (ಇ) | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ,2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನುನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| 11.3<br>ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೇಸೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. |
| 11.4 ಮಾಜಿ ಸೈನಿಕರಿಗೆ ಮೀಸಲಾತಿ | (ಅ) | (1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ)ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾವ್ಯಕ್ತಿಯಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದಬಿಡುಗಡೆ ಹೊಂದಿದ ವ್ಯಕ್ತಿ |
| | | ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ಧಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು. |
| | | (i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ |

| | | |
|---|---|---|
| | | ವ್ಯಕ್ತಿ<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು<br>ವಿವರಣೆ :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲುಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. |
| | (ಆ) | 2)ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | (ಇ) | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. |
| | (ಈ) | ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ತೋರಿಸಲಾಗಿದೆ. |
| | (ಉ) | ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಿ ಅರ್ಜಿಯೊಂದಿಗೆ ಅಪ್ಲೋಡ್ ಮಾಡತಕ್ಕದ್ದು, ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಇದೇ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. |
| 11.5 ಅನುಚ್ಛೇದ 371(ಜೆ)ರಂತೆ ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-ಎಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ |

| | | |
|---|---|---|
| | | ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.<br><br>ವಿಶೇಷ ಸೂಚನೆ:- ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 03 ಹೈಕಕೋ 2019, ದಿನಾಂಕ:15-06-2022ರಲ್ಲಿ ಸೂಚಿಸಿರುವಂತೆ ಆನ್- ಲೈನ್ ಅರ್ಜಿ ಸಲ್ಲಿಸುವಾಗ ಆದ್ಯತೆ (Option)ಯನ್ನು ತಪ್ಪದೆ ನೀಡತಕ್ಕದ್ದು. |
| 11.6 ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಹೈದರಾಬಾದ್ - ಕರ್ನಾಟಕ ಮೀಸಲಾತಿ:- | (ಅ) | ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ 29-01-2014 ರಂದು ಹೊರಡಿಸಲಾದ ಅಧಿಸೂಚನೆ-1 ಸಂಖ್ಯೆ ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ-ಎ ನಲ್ಲಿ ಇರುವಂತೆ ತಮ್ಮ ಸೇವಾ ಪುಸ್ತಕದಲ್ಲಿ ದಿನಾಂಕ:01-01-2013 ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್ - ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಯಾದಗಿರಿ ಮತ್ತು ವಿಜಯನಗರ ಕಂದಾಯ ಜಿಲ್ಲೆಗಳ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ಕಛೇರಿ ಮುಖ್ಯಸ್ಥರಿಂದ ದಿನಾಂಕ: 29-01-2014ರ ಅಧಿಸೂಚನೆ-1 ರಲ್ಲಿನ ನಿಯಮ 5(2) ರಲ್ಲಿ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಆಧರಿಸಿ ಅಂತಹವರ ಅರ್ಜಿಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗೆದುರಾಗಿ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು. |
| 11.7 ಅಂಗವಿಕಲ ಅಭ್ಯರ್ಥಿ | | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ ಆರ್ ಆರ್ 2020 ದಿನಾಂಕ 25-09-2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-`ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br><br>• ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇನೆನಿ 2013 ದಿನಾಂಕ:11-02-2021 ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು |

| | | |
|---|---|---|
| | | ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ-3 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು. ತಾವೇ ಸ್ವತ: ಲಿಪಿಕಾರರನ್ನು ಕರೆತರಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ-3 ಮತ್ತು ಅನುಬಂಧ-4ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿಕಡ್ಡಾಯವಾಗಿ ನಮೂದಿಸತಕ್ಕದ್ದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಯ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು. (ಅನುಬಂಧ-3 ಮತ್ತು 4ರ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).<br>❖ ಅಭ್ಯರ್ಥಿಗಳು ಲಿಪಿಕಾರರ ಸೇವೆಯನ್ನು ಒದಗಿಸುವಂತೆ ಆಯ್ಕೆಪ್ರಾಧಿಕಾರ/ ಆಯೋಗವನ್ನು ಕೋರಿದ್ದಲ್ಲಿ ಅವಶ್ಯಕತೆಯ ಅನುಸಾರ ಲಿಪಿಕಾರರನ್ನು ಒದಗಿಸಲು ವ್ಯವಸ್ಥೆ ಮಾಡುವಂತೆ ಸಂಬಂಧಿತ ಜಿಲ್ಲೆಯ ಜಿಲ್ಲಾಧಿಕಾರಿಗಳು/ಅಪರ ಜಿಲ್ಲಾಧಿಕಾರಿಗಳು/ಪರೀಕ್ಷಾ ಉಪ ಕೇಂದ್ರದ ಮುಖ್ಯಸ್ಥರನ್ನು ಕೋರಲಾಗುವುದು.<br>❖ ಅಭ್ಯರ್ಥಿಗಳ ಕೋರಿಕೆಯ ಅವಶ್ಯಕತೆಯ ಅನುಸಾರ Large Font Sizeಪ್ರಶ್ನೆಪತ್ರಿಕೆಗಳನ್ನು ಆಯೋಗದಿಂದ ಒದಗಿಸಲಾಗುವುದು.<br>❖ ಪರೀಕ್ಷಾ ದಿನದಂದು ಪರೀಕ್ಷೆಯ ಪ್ರಾರಂಭಕ್ಕೆ ಮುಂಚೆ ಗೊಂದಲ ಮತ್ತು ವಿಚಲತೆಯನ್ನು ತಪ್ಪಿಸಲು ನೆಲಮಹಡಿಯಲ್ಲಿ ಪ್ರಾಶಸ್ತ್ಯ ಕೊಟ್ಟು ಸರಿಯಾದ ಆಸನ/ವೀಲ್ ಚೇರ್ ವ್ಯವಸ್ಥೆಯನ್ನು ಕಲ್ಪಿಸುವಂತೆ ಸಂಬಂಧಿತ ಪರೀಕ್ಷಾ ಉಪಕೇಂದ್ರದ ಮುಖ್ಯಸ್ಥರನ್ನು ಕೋರಲಾಗುವುದು. |
